**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT: ಬಜೆಟ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ                ದಿನಾಂಕ : DATE : 13/2/12

# ಬಜೆಟ್ ಅನುದಾನ ಕಡಿತ ಸಹಕಾರ್ರ ಕೋರಿದ್ದ ಸಿಎಂ

ಬೆಂಗಳೂರು: ಬಜೆಟ್ ಪೂರ್ವ ಸಿದ್ಧತಾ ಸಭೆ ಮುಂದುವರಿಸಿರುವ ಸಿಎಂ ಬಿ.ಎಸ್.ಯಡಿಯೂರಪ್ಪ, ಶುಕ್ರವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,



ಸಣ್ಣ ಕೈಗಾರಿಕೆ, ಸಕ್ಕರೆ, ಜವಳಿ, ಅಲ್ಪಸಂಖ್ಯಾತ ಕಲ್ಯಾಣ ಖಾತೆ ಸಚಿವರು ಮತ್ತು ಸಂಬಂಧಿತ ಅಧಿಕಾರಿಗಳ ಸಭೆ ನಡೆಸಿದರು. ಈ ಬಾರಿ ಹಣಕಾಸಿನ ಸಮಸ್ಯೆ ಬಗ್ಗೆ ನಿಮಗೆ ಗೊತ್ತಿದೆ. ಆದ್ದರಿಂದ ಆದಷ್ಟು ಕಡಿಮೆ ಅನುದಾನ ನೀಡಬೇಕಾದ ಅನಿವಾರ್ಯತೆ ಇದೆ. ಇದಕ್ಕೆ ನಿಮ್ಮೆಲ್ಲರ ಸಹಕಾರ ಬೇಕು ಎಂದು ಸಿಎಂ ಪ್ರಾರಂಭದಲ್ಲಿಯೇ ಭಿನ್ನಹ ಮಾಡಿದರೆನ್ನಲಾಗಿದೆ. ಹೊಸ ಅನುದಾನ ಜತೆಗೆ ಕಳೆದ ವರ್ಷದಲ್ಲಿ ಕಡಿತ ಮಾಡಿರುವ ಅನುದಾನ ಸೇರ್ಪಡೆ ಮಾಡಿಕೊಡಬೇಕು ಎಂದು ಸಚಿವರು ವಿನಂತಿ ಮಾಡಿಕೊಂಡಿದ್ದರೂ, ಅದಕ್ಕೆ ಸಿಎಂ ನೋಡೋಣ ಎಂದಷ್ಟೇ ಉತ್ತರ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಸಚಿವರು ಸಹ ಅವರವರ ಇಲಾಖೆ ವಿಚಾರದಲ್ಲಿ ಒತ್ತಡಕ್ಕೆ ಸಿಲುಕಿದ್ದು, ಹೆಚ್ಚು ಅನುದಾನಕ್ಕೆ ಬೇಡಿಕೆ ಇಡುತ್ತಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.